ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಖಾಸಗಿ ಟ್ರಾನ್ಸ್‌ಪೋರ್ಟ್ ಕಂಪನಿಗಳ ವಾಹನ ಪರವಾನಗಿ ಕುರಿತು

ಡಾ|| ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ):-

914 (1119) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೆಲವು ಖಾಸಗಿ ಟ್ರಾನ್ಸ್‌ಪೋರ್ಟ್ ಕಂಪನಿಗಳು ಒಂದೇ ವಾಹನದ ಸಂಖ್ಯೆ/ಪರವಾನಗಿಯನ್ನು ಬಳಸಿ 2-3 ಬಸ್ಸುಗಳನ್ನು ಚಲಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕಠಿಣ ಕ್ರಮಗಳೇನು;

(ಈ) ಇಂತಹ ಪ್ರಕರಣಗಳ ಬಗ್ಗೆ ಗೊತ್ತಿದ್ದರೂ ಇಂತಹವರ ಜೊತೆ ಶಾಮೀಲಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡ ಕ್ರಮಗಳೇನು ?